RNU AIR DHARWAD

# MARCH 23,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ಗಳಲ್ಲಿ ಪ್ರಯಾಣಿಸುವವರ ಸಂಖ್ಯೆ ಹೆಚ್ಚಾಗಿದ್ದು, ಪ್ರಯಾಣಿಕರಿಗೆ ಉತ್ತಮ ಸೇವೆ ಒದಗಿಸುವ ನಿಟ್ಟಿನಲ್ಲಿ ಬಸ್ ಗಳ ಸಂಖ್ಯೆಯನ್ನು ಹೆಚ್ಚಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಬಜೆಟ್ ನಲ್ಲಿ ಸಾರಿಗೆ ನಿಗಮಗಳಿಗೆ ಒಂದು ಸಾವಿರ ಬಸ್ ಗಳನ್ನು ಒದಗಿಸುವ ಬಗ್ಗೆ ಘೋಷಿಸಲಾಗಿತ್ತು, ಇದನ್ನು ಪರಿಷ್ಕರಿಸಿ ಎರಡು ಸಾವಿರ ಹೊಸ ಬಸ್ ಗಳನ್ನು ಖರೀದಿಸಲು ನಿರ್ಧರಿಸಲಾಗಿದೆ, ಇದಕ್ಕೆ ಬೇಕಿರುವ ಅನುದಾನವನ್ನು ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

'ಬಲಿದಾನ ದಿನ'ದ ಹಿನ್ನೆಲೆ, ಧಾರವಾಡದಲ್ಲಿ ವೀರ ಸಾವರಕರ ಬಳಗ, ಇಂದು ಸಂಜೆ 6 ಗಂಟೆಗೆ, ಧಾರವಾಡದ ಮಾಳಮಡ್ಡಿಯ ವನವಾಸಿ ಶ್ರೀರಾಮ ಮಂದಿರದಿಂದ, ಗಡಿ ಕಾಯುವ ದೇವರುಗಳ ಗುಡಿ, ಕಾರ್ಗಿಲ್ ಸ್ತೂಪದ ವರೆಗೆ, ಪಂಜಿನ ಮೆರವಣಿಗೆ ಆಯೋಜಿಸಿದೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ವೀರ ಸಾವರಕರ ಬಳಗದ, ಗುರುದತ್ತ ದೇಶಪಾಂಡೆ.

<><><>

**ಗುರುದತ್ತ ದೇಶಪಾಂಡೆ ಧ್ವನಿ 34 ಸೆಕೆಂದುಗಳು**

<><><>

ನ್ಯಾಯಮೂರ್ತಿ ನಾಗಮೋಹನ್ ದಾಸ್, ಒಳ ಮೀಸಲಾತಿ ಜಾರಿಗೆ, ನಿಯಮಗಳನ್ನು ಕಾನೂನು ಬದ್ಧವಾಗಿ ರೂಪಿಸಲಿದ್ದಾರೆ ಎಂದು, ಗೃಹ ಖಾತೆ ಸಚಿವ ಜಿ. ಪರಮೇಶ್ವರ ತಿಳಿಸಿದ್ದಾರೆ. ತುಮಕೂರು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಅವರು, ಸಭೆ ನಡೆಸಿದರು. ಕಾಂತರಾಜು ಆಯೋಗದ ವರದಿಯನ್ನು ಸರ್ಕಾರ ಸ್ವೀಕರಿಸಿ, ದತ್ತಾಂಶ ಮಾಹಿತಿ ಪಡೆಯಲಿದೆ. ಸರ್ವೋಚ್ಚ ನ್ಯಾಯಾಲಯದ ಸೂಚನೆಯಂತೆ, ಜನಸಂಖ್ಯೆ ಆಧಾರದ ಮೇಲೆ ಒಳ ಮೀಸಲಾತಿ ಜಾರಿ ಮಾಡಲು, ಸರ್ಕಾರ ಬದ್ಧವಿದೆ ಎಂದರು.

<><><>

ಕಲುಷಿತ ಆಹಾರ ಸೇವಿಸಿ ಅಸ್ವಸ್ಥಗೊಂಡ ಹಿನ್ನೆಲೆ, ಮಂಡ್ಯದ 'ಮಿಮ್ಸ್ ಆಸ್ಪತ್ರೆ'ಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ, ಮೇಘಾಲಯದ 22 ವಿದ್ಯಾರ್ಥಿಗಳು ಹಾಗೂ ಮಳವಳ್ಳಿಯ 7 ವಿದ್ಯಾರ್ಥಿಗಳು ಸೇರಿ, ಒಟ್ಟು 29 ವಿದ್ಯಾರ್ಥಿಗಳು ಚೇತರಿಸಿಕೊಂಡಿದ್ದಾರೆ. ಆಸ್ಪತ್ರೆಯಿಂದ ಬಿಡುಗಡೆಯಾದ, ಮೇಘಾಲಯದ ವಿದ್ಯಾರ್ಥಿಗಳಿಗೆ, ಮಂಡ್ಯದ ಬಾಲಕರ ಬಾಲ ಮಂದಿರದಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು, ಜಿಲ್ಲಾಧಿಕಾರಿ ಕುಮಾರ ತಿಳಿಸಿದ್ದಾರೆ.

<><><>

ಧಾರವಾಡ ತಾಲ್ಲೂಕು 11 ನೇ ಕನ್ನಡ ಸಾಹಿತ್ಯ ಸಮ್ಮೇಳನವು ಇದೇ ಬರುವ 25 ನೇ ತಾರೀಖಿನಂದು, ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜರುಗಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷ ಲಿಂಗರಾಜ ಅಂಗಡಿ ತಿಳಿಸಿದರು. ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸಾಹಿತಿ ವಿನಯಾ ಒಕ್ಕುಂದ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸಮ್ಮೇಳನಾಧ್ಯಕ್ಷರಾದ ವೈದ್ಯ ಸಾಹಿತಿ ಡಾಕ್ಟರ್ ನಿತಿನ್ ಚಂದ್ರ ಹತ್ತಿಕಾಳ ಪ್ರಧಾನ ಭಾಷಣ ಮಾಡಲಿದ್ದಾರೆ ಎಂದರು.

<><><>

ಇಂದು ಕನ್ನಡದ ಪ್ರಥಮ ರಾಷ್ಟ್ರಕವಿ, ಮಂಜೇಶ್ವರ ಗೋವಿಂದ ಪೈ ಅವರ ಜನ್ಮ ವಾರ್ಷಿಕ ದಿನ. ವೈಶಾಖಿ, ಗೊಲ್ಗೊಥಾ ಸಹಿತ ಹಲವು ಖಂಡಕಾವ್ಯಗಳು, ಸಂಶೋಧನಾ ಗ್ರಂಥಗಳ ಮೂಲಕ ಕನ್ನಡ ಸಾಹಿತ್ಯ ಪರಂಪರೆಯನ್ನು ಅವರು ಶ್ರೀಮಂತಗೊಳಿಸಿದ್ದರು, ಗೋವಿಂದ ಪೈ ಅವರ ಜನ್ಮದಿನದಂದು ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಸೇರಿದಂತೆ ಗಣ್ಯರು ಅವರ ಸಾಹಿತ್ಯ ಸೇವೆಯನ್ನು ಸ್ಮರಿಸಿಕೊಂಡಿದ್ದಾರೆ.

<><><>

ಕಲಿಯುವ ಆಸಕ್ತಿಯಿಂದ ಬಂದ ಸಮಾಜದ ಎಲ್ಲ ವರ್ಗದ ಜನರಿಗೆ ಕಾನೂನು ಶಿಕ್ಷಣ ನೀಡಿದ ಡಾಕ್ಟರ ಜಿ.ಎಂ. ಪಾಟೀಲರ ಕಾರ್ಯ ಎಂದಿಗೂ ಸ್ಮರಣೀಯ ಎಂದು ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪ ಮೊಯ್ಲಿ ಹೇಳಿದ್ದಾರೆ. ಧಾರವಾಡದ ಡಾಕ್ಟರ ಜಿ.ಎಂ. ಪಾಟೀಲ ಕಾನೂನು ಕಾಲೇಜಿನಲ್ಲಿ ಆಯೋಜಿಸಲಾಗಿದ್ದ, ಕರ್ನಾಟಕ ಪ್ರಗತಿಶೀಲ ಶಿಕ್ಷಣ ಸಂಸ್ಥೆ (ಕೆಪಿಇಎಸ್) ಸಂಸ್ಥಾಪಕ ಡಾಕ್ಟರ ಜಿ.ಎಂ. ಪಾಟೀಲ ಶತಮಾನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

<><><>

ಕಾಳುಮೆಣಸು ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಉತ್ತರ ಕನ್ನಡ ಜಿಲ್ಲೆ ಶಿರಸಿ ಮಾರುಕಟ್ಟೆ ದರವನ್ನು ಸ್ಪೈಸ್ ಬೋರ್ಡ್ ದರಪಟ್ಟಿಯಲ್ಲಿ ದಾಖಲಿಸಲು, ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಒಪ್ಪಿಗೆ ಸೂಚಿಸಿದ್ದಾರೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಆಕಾಶವಾಣಿಯ ಬಹುಶ್ರುತ ಕಾರ್ಯಕ್ರಮ, 'ಮನ್ ಕಿ ಬಾತ್' ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 30, ಬರುವ ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯನ್ನುದ್ದೇಶಿಸಿ, ಮಾತನಾಡಲಿದ್ದಾರೆ. ಇದು ಮನದ ಮಾತಿನ 120ನೇ ಸಂಚಿಕೆಯಾಗಿದೆ. ಸಾರ್ವಜನಿಕರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು, "ಮೈ ಜಿ.ಒ.ವಿ. ಓಪನ್ ಫೋರ್‌ಂ", "ನಮೋ ಆ್ಯಪ್" ಅಥವಾ ಉಚಿತ ಸಹಾಯವಾಣಿ ಸಂಖ್ಯೆ 1800-11-7800 ಮೂಲಕ ಹಂಚಿಕೊಳ್ಳಬಹುದು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>